ಶಿರಹಟ್ಟಿ ಮತಕ್ಷೇತ್ರದಲ್ಲಿ ಆಶ್ರಯ ಹಾಗೂ ಜನತಾ ಮನೆಗಳು

777 - ಶ್ರೀ ಗಡ್ಡದೇವರಮಠ ಗದ್ದಯ್ಯ ಶಿವಮೂರ್ತಯ್ಯ (ಶಿರಹಟ್ಟಿ) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಶಿರಹಟ್ಟಿ ಮತಕ್ಷೇತ್ರದಲ್ಲಿ ಕಟ್ಟಿಸಲಾಗಿರುವ ಆಶ್ರಯ ಹಾಗೂ ಜನತಾ ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸದಿರುವುದು ಹಾಗೂ ಸದರಿ ಕಾಲೋನಿಗಳಲ್ಲಿ ಬೀದಿ ದೀಪಗಳನ್ನು ಹಾಕದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ, ಸದರಿ ಮನೆಗಳಿಗೆ ವಿದ್ಯುತ್ ಸಂಪರ್ಕ ಹಾಗೂ ಬೀದಿದೀಪ ಹಾಕಲು ಸರ್ಕಾರವು ಕೂಡಲೇ ಕ್ರಮ ಕೈಗೊಳ್ಳುವುದೇ?*

ಶ್ರೀ ವೀರಕುಮಾರ್ ಪಾಟೀಲ್ (ಇಂಧನ ರಾಜ್ಯ ಸಚಿವರು) :

ಅ) ಶಿರಹಟ್ಟಿ ಮತಕ್ಷೇತ್ರದಲ್ಲಿ 41 ಆಶ್ರಯ: ಜನತಾ ಕಾಲೋನಿಗಳನ್ನು ಗುರುತಿಸಲಾಗಿರುತ್ತದೆ. ಇವುಗಳ ಪೈಕಿ ಪ್ರಸ್ತುತ ವರ್ಷದಲ್ಲಿ ಫೆಬ್ರವರಿ 2000 ಅಂತ್ಯದವರೆಗೆ 6 ಆಶ್ರಯ : ಜನತಾ ಕಾಲೋನಿಗಳನ್ನು ವಿದ್ಯುದೀಕರಣಗೊಳಿಸಿದ್ದು, ಇನ್ನು 3 ಆಶ್ರಯ : ಜನತಾ ಕಾಲೋನಿಗಳ ವಿದ್ಯುದೀಕರಣದ ಕೆಲಸ ಪ್ರಗತಿಯಲ್ಲಿದ್ದು, ಆದಷ್ಟು ಶೀಘ್ರ ಗತಿಯಲ್ಲಿ ಪೂರ್ಣಗೊಳಿಸಲಾಗುವುದು.

ಆ) ನಿಗಮವು ವಾರ್ಷಿಕ ಗುರಿಯನ್ನು ನಿಗದಿಪಡಿಸಿಕೊಂಡು ನಿಗಮದ ಆರ್ಥಿಕ ಸಂಪನ್ಮೂಲಗಳನ್ನು ಅವಲಂಭಿಸಿ ವಿದ್ಯುದ್ದೀಕರಣವನ್ನು ಪೂರೈಸಲು ಪ್ರಯತ್ನ ಮಾಡುತ್ತದೆ. ಹಾಗೂ ಕಾಲೋನಿಗಳ ಗ್ರಾಮೀಣ ವಿದ್ಯುದ್ದೀಕರಣ ಯೋಜನೆಗಳಡಿಯಲ್ಲಿ ಸೇರಿಸಿ, ಗ್ರಾಮೀಣ ವಿದ್ಯುದ್ದೀಕರಣ ನಿಗಮದಿಂದ ಸಾಲ ಸೌಲಭ್ಯ ಪಡೆದು ವಿದ್ಯುದ್ದೀಕರಣ ಕಾರ್ಯಕೈಗೊಳ್ಳಲು ಪ್ರಯತ್ನ ಮಾಡುತ್ತಿದೆ. ಈ ದಿಶೆಯಲ್ಲಿ ಶಿರಹಟ್ಟಿ ಮತಕ್ಷೇತ್ರದಲ್ಲಿರುವ ಉಳಿದ 32 ಆಶ್ರಯ : ಜನತಾ ಕಾಲೋನಿಗಳ ವಿದ್ಯುದ್ದೀಕರಣಕ್ಕೆ ಅವಶ್ಯವಿರುವ ಮಾಹಿತಿಯೊಂದಿಗೆ ಕಾರ್ಯ ಯೋಜನೆ ತಯಾರಿಸಿ ಗ್ರಾಮೀಣ ವಿದ್ಯುದ್ದೀಕರಣ ನಿಗಮದಿಂದ ಸಾಲ ಸೌಲಭ್ಯವನ್ನು ಪಡೆದು, ಹಂತ ಹಂತವಾಗಿ ವಿದ್ಯುದ್ದೀಕರಣಗೊಳಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಆಶ್ರಯ ಹಾಗೂ ಜನತಾ ಕಾಲೋನಿಗಳಲ್ಲಿ ಇರುವ ಮನೆಗಳಿಗೆ ಭಾಗ್ಯಜ್ಯೋತಿ ಹಾಗೂ ಕುಠೀರ ಜ್ಯೋತಿ ಯೋಜನೆಗಳಡಿಯಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಲು ಅವಕಾಶವಿರುತ್ತದೆ. ಆದರೆ, ಸದರಿ ಯೋಜನೆಗಳಡಿಯಲ್ಲಿ ಫಲಾನುಭವಿಗಳ ಆಯ್ಕೆಯು ಜಿಲ್ಲಾ ಪಂಚಾಯತ್ ಅಧಿಕಾರವರ್ಗಕ್ಕೆ ಸಂಬಂಧಿಸಿರುತ್ತದೆ.

ಅನುಕಂಪ ಆಧಾರದ ಮೇಲೆ ನೇಮಕಾತಿ

778 - ಶ್ರೀ ಎ.ಎಸ್. ಗುರುಸ್ವಾಮಿ (ಚಾಮುಂಡೇಶ್ವರಿ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿಗಾಗಿ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು? (ಇಲಾಖಾವಾರು ಮಾಹಿತಿ ಒದಗಿಸುವುದು)*

ಅ) ಈ ನೇಮಕಾತಿಗೆ ಇರುವ ಅಡೆತಡೆಗಳು ಯಾವುವು?

ಇ) ಈ ಪ್ರಕರಣಗಳನ್ನು ಇತ್ಯರ್ಥಪಡಿಸಲು ಬೇಕಾಗುವ ಕಾಲಾವಧಿ ಎಷ್ಟು?

ಶ್ರೀ ಎಸ್. ಎಂ. ಕೃಷ್ಣ (ಮುಖ್ಯಮಂತ್ರಿಗಳು) :

ಅ) ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡುವ ಅಧಿಕಾರವನ್ನು ವಿವಿಧ ಇಲಾಖೆಗಳಲ್ಲಿನ ನೇಮಕಾತಿ ಪ್ರಾಧಿಕಾರಗಳಿಗೆ ನೀಡಲಾಗಿರುವುದರಿಂದ ಈ ಮಾಹಿತಿ ಕೇಂದ್ರೀಕೃತವಾಗಿ ಕೂಡಲೇ ಲಭ್ಯವಿರುವುದಿಲ್ಲ.

ಆ) ಅರ್ಜಿದಾರರು ಯಾವ ಹುದ್ದೆಗೆ ನೇಮಕಾತಿ ಹೊಂದಲು ಅರ್ಹರಿದ್ದಾರೋ, ಆ ಹುದ್ದೆ ಖಾಲಿ ಇದ್ದಲ್ಲಿ ಅವರಿಗೆ ನೇಮಕಾತಿ ನೀಡಲು ಯಾವ ಅಡೆತಡೆಗಳು ಇರುವುದಿಲ್ಲ.

ಇ) ಕರ್ನಾಟಕ ಸಿವಿಲ್ ಸೇವೆಗಳು (ಅನುಕಂಪದ ಆಧಾರದ ಮೇಲೆ ನೇಮಕಾತಿ) ನಿಯಮಗಳು 1996ರ ನಿಯಮ 6 ರ ಉಪನಿಯಮ (2) ರಂತೆ, ಸಾಧ್ಯವಾದಷ್ಟು ಮಟ್ಟಿಗೆ ಅರ್ಜಿ ಸ್ವೀಕೃತವಾದ ತಿಂಗಳೊಳಗಾಗಿ ನೇಮಕಾತಿ ಮಾಡಬೇಕಾಗಿದೆ.

ನೀರಾವರಿ ಇಲಾಖೆಯಲ್ಲಿ ದರ್ಜೆ ಮತ್ತು ನೇಮಕಾತಿ ನಿಯಮಗಳು

779 - ಶ್ರೀ ಎ.ಎಸ್. ಗುರುಸ್ವಾಮಿ (ಚಾಮುಂಡೇಶ್ವರಿ) : ಮಾನ್ಯ ಬೃಹತ್ ಮತ್ತು ಮಧ್ಯಮ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆಯ ಅಡಿಯಲ್ಲಿ ಬರುವ ಎಲ್ಲಾ ಇಲಾಖೆಗಳು ತಮ್ಮ ತಮ್ಮ ಇಲಾಖೆಯ ದರ್ಜೆ ಮತ್ತು ನೇಮಕಾತಿ ನಿಯಮಾವಳಿಗಳನ್ನು ಇಲಾಖೆಗಳು ರಚಿಸಿವೆಯೇ? (ಇಲಾಖಾವಾರು ವಿವರಗಳನ್ನು ನೀಡುವುದು)

ಆ) ರಚಿಸದಿದ್ದಲ್ಲಿ ಅದಕ್ಕೆ ಕಾರಣಗಳೇನು?

ಇ) ಈ ಮೇಲ್ಕಂಡ ಇಲಾಖೆಗಳು ತಿದ್ದುಪಡಿಗಳನ್ನು ತರಲು ಉದ್ದೇಶಿಸಿವೆಯೇ?

ಈ) ಹಾಗಿದ್ದಲ್ಲಿ ಅವು ಯಾವುವು? (ಇಲಾಖಾವಾರು ವಿವರ ನೀಡುವುದು)

ಶ್ರೀ ಹೆಚ್. ಕೆ. ಪಾಟೀಲ್ (ಬೃಹತ್ ಮತ್ತು ಮಧ್ಯಮ ನೀರಾವರಿ ಸಚಿವರು) :

ಅ) ನೀರಾವರಿ ಇಲಾಖೆಗೆ ಸಂಬಂಧಪಟ್ಟಂತೆ ದಿ. 5-7-1989 ರಲ್ಲಿ ವೃಂದ ಮತ್ತು ನೇಮಕಾತಿ ನಿಯಮಾವಳಿಗಳನ್ನು ರಚಿಸಲಾಗಿದೆ. ನೀರಾವರಿ ಇಲಾಖೆಯ ಅಧೀನದಲ್ಲಿ ಬರುವ ಈ ಕೆಳಕಂಡ ಇಲಾಖೆಗಳ ವಿವರಗಳು ಈ ರೀತಿ ಇವೆ.

1. ಕಾಡಾ ಇಲಾಖೆಗೆ ಪ್ರತ್ಯೇಕವಾಗಿ ದಿ. 13.3.96 ರಂದು ವೃಂದ ಮತ್ತು ನೇಮಕಾತಿ ನಿಯಮಾವಳಿಗಳನ್ನು ರಚಿಸಲಾಗಿದೆ.
2. ಜಲ ಮತ್ತು ನೆಲ ನಿರ್ವಹಣಾ ಸಂಸ್ಥೆ, (ವಾಲ್ಮಿ), ಧಾರವಾಡ ಇದಕ್ಕೆ ಕರಡು ವೃಂದ ಮತ್ತು ನೇಮಕಾತಿ ನಿಯಮಾವಳಿಗಳನ್ನು ರೂಪಿಸಲಾಗಿದೆ.